ಹುಬ್ಬಳ್ಳಿ - ಧಾರವಾಡ ಮಹಾನಗರ ಪಾಲಿಕೆಯ ಸಮಗ್ರ ಅಭಿವೃದ್ಧಿ ಕುರಿತು

4751 - ಶ್ರೀ ಹೊನ್ನಳ್ಳಿ ಜಬ್ಬಾರ್‌ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) *ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲು ವಿಶ್ವಬ್ಯಾಂಕ್ ನೆರವು ಪಡೆಯುವ ವಿಚಾರ ಸರ್ಕಾರದ ಗಮನದಲ್ಲಿದೆಯೇ ?*

ಆ) *ವಿಶ್ವ ಬ್ಯಾಂಕಿನಿಂದ ಹಣಕಾಸು ನೆರವು ಪಡೆಯಲಿಕ್ಕಾಗಿ ಸರ್ಕಾರ ಈವರೆಗೆ ಕೈಗೊಂಡ ಕ್ರಮವೇನು ?*

ಇ) *ಹಾಗಿಲ್ಲದಿದ್ದಲ್ಲಿ ಕಾರಣವೇನು ?*

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಹುಬ್ಬಳ್ಳಿ ಧಾರವಾಡ ನಗರಕ್ಕೆ ಕುಡಿಯುವ ನೀರಿನ ವ್ಯವಸ್ಥೆ

4753 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) *ಹುಬ್ಬಳ್ಳಿ-ಧಾರವಾಡ ಅವಳಿ ನಗರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆ ರೂಪಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೆ ?*

ಆ) *ಹಾಗಿದ್ದಲ್ಲಿ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ಮತ್ತು ಯೋಜನೆಯ ಸಂಪೂರ್ಣ ವಿವರಗಳನ್ನು ನೀಡುವುದು.*

ಇ) *ಈ ಯೋಜನೆ ಕಾರ್ಯರೂಪ ಬಂದರೆ ಹುಬ್ಬಳ್ಳಿ-ಧಾರವಾಡ ಅವಳಿ ನಗರಕ್ಕೆ ಅಗತ್ಯ ನೀರು ಪೂರೈಕೆಯಾಗುತ್ತದೆಯೆ ?*

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗಾರಭಿವೃದ್ಧಿ ಸಚಿವರು) :

ಅ) ಇದೆ.

ಆ) ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಿಗೆ ಮಲಪ್ರಭಾ ಜಲಾಶಯವನ್ನು ಮೂಲವಾಗಿಟ್ಟುಕೊಂಡು 3ನೇ ಹಂತದ ನೀರು ಸರಬರಾಜು ಯೋಜನೆಗೆ ವಿವರವಾದ ಅಂದಾಜು ಸರ್ಕಾರದ ಪರಿಶೀಲನೆಯಲ್ಲಿದೆ. ಈ ಯೋಜನೆಯನ್ನು 2009ರ ಇಸವಿಯಲ್ಲಿ ಇರಬಹುದಾದ ಜನ ಸಂಖ್ಯೆ 9.00